**ಪ್ರಧಾನ ನ್ಯಾಯಿಕ ದಂಡಾಧಿಕಾರಿ ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಮಾಗಡಿ**

**ಕ್ರಿಮಿನಲ್ ಪ್ರಕರಣ ಸಂಖ್ಯೆ : 6022 / 2022**

ಸಿ.ಡಬ್ಲ್ಯೂ :- 13 / ಪಿ.ಡಬ್ಲ್ಯೂ :- 06

| | |
|---|---|
| ಹೆಸರು | **ಮಂಜುನಾಥ ಬಿ.ಆರ್** |
| ತಂದೆ ಹೆಸರು | **ಲೇಟ್ ರಾಮಯ್ಯ** |
| ವಯಸ್ಸು | **54 ವರ್ಷ** |
| ವೃತ್ತಿ | **ಎ.ಎಸ್.ಐ. ಮಾಗಡಿ ಪೋಲಿಸ್ ಠಾಣೆ** |
| ವಾಸಸ್ಥಳ | **ಮಾಗಡಿ** |

**ದಿನಾಂಕಃ 15-07-2026** ರಂದು ಸಾಕ್ಷಿಗೆ ಕ್ರಮಬದ್ದವಾಗಿ ಪ್ರಮಾಣವಚನವನ್ನು ಬೋಧಿಸಲಾಯಿತು.

**ಮುಖ್ಯ ವಿಚಾರಣೆ :- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ** :-

ನಾನು 2021 ರಿಂದ ಇಲ್ಲಿಯವರೆವಿಗೂ ಮಾಗಡಿ ಪೋಲಿಸ್ ಠಾಣೆಯಲ್ಲಿ ಎ.ಎಸ್.ಐ. ಆಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿನಾಂಕಃ 05-08-2022 ರಂದು ನಾನು ಠಾಣಾ ಪ್ರಭಾರದಲ್ಲಿರುವಾಗ ಬೆಳಿಗ್ಗೆ 11.30 ಗಂಟೆಯ ಸುಮಾರಿಗೆ ಚಾಸಾ-1 ರವರು ಠಾಣೆಗೆ ಹಾಜರಾಗಿ ಅಪಘಾತ ಹಿನ್ನಲೆಯ ಮೇರೆಗೆ ದೂರು ನೀಡಿದ್ದು, ಅದನ್ನು ನಾನು ಸ್ವೀಕರಿಸಿ ಠಾಣಾ ಅಪರಾಧ ಕ್ರಮ ಸಂಖ್ಯೆ-235/2022 ರಂತೆ ಪ್ರಕರಣವನ್ನು ದಾಖಲಿಸಿಕೊಂಡು ಪ್ರಥಮ ವರ್ತಮಾನ ವರದಿಯನ್ನು ತಯಾರಿಸಿ ಮಾನ್ಯ ನ್ಯಾಯಾಲಯಕ್ಕೆ ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿಗೆ ಕಡತದಲ್ಲಿನ ದೂರು ಎಂಬ ದಾಖಲೆಯನ್ನು ತೋರಿಸಲಾಗಿ ಸದರಿ ದಾಖಲೆಯಲ್ಲಿನ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಸದರಿ ದಾಖಲೆ ಈಗಾಗಲೇ ನಿಪಿ-01 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-01(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಕಡತದಲ್ಲಿನ ಒಂದು ದಾಖಲೆಯನ್ನು ತೋರಿಸಲಾಗಿ ಸದರಿ ದಾಖಲೆಯಲ್ಲಿ ತಮ್ಮ ಸಹಿಯನ್ನು ಗುರುತಿಸಿರುತ್ತಾರೆ. ಸದರಿ ದಾಖಲೆಯು ಪ್ರಥಮ ವರ್ತಮಾನ ವರದಿ ಆಗಿದ್ದು, ಅದನ್ನು ನಿಪಿ-07 ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-07(ಎ) ಎಂದು ಗುರುತಿಸಲಾಯಿತು. ನಂತರ ಅದೇ ದಿವಸ ಅಪಘಾತ ಸ್ಥಳಕ್ಕೆ ಭೇಟಿ ನೀಡಿದ್ದು, ಪಂಚರಿಗೆ ನೋಟಿಸ್ ನೀಡಿ, ಗಾಯಾಳು ಚಾಸಾ-2 ರವರು ತೋರಿಸಿದ ಜಾಗದಲ್ಲಿ ಚಾಸಾ-4 ಮತ್ತು 5 ರವರ ಸಮಕ್ಷಮ ಮಧ್ಯಾಹ್ನ 2 ರಿಂದ 3 ಗಂಟೆಯವರೆಗೆ ನಿಪಿ-2 ರಂತೆ ಪಂಚನಾಮೆ ಮಾಡಿರುತ್ತೇನೆ. ಸಾಕ್ಷಿಗೆ ಕಡತದಲ್ಲಿನ ಸ್ಥಳ ಮಹಜರ್ ಎಂಬ ದಾಖಲೆಯನ್ನು ತೋರಿಸಲಾಗಿ ಸದರಿ ದಾಖಲೆಯಲ್ಲಿನ ತನ್ನ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಸದರಿ ದಾಖಲೆ ಈಗಾಗಲೇ ನಿಪಿ-02 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-02(ಬಿ)

ಎಂದು ಗುರುತಿಸಲಾಯಿತು. ನಂತರ ಅಪಘಾತ ಉಂಟು ಮಾಡಿದ ಕೆಎ-42-ಎಫ್-0227 KSRTC ಬಸ್ಸನ್ನು ತಂದು ಹಾಜರು ಪಡಿಸುವಂತೆ ಸಂಬಂಧ ಇಲಾಖೆಯ ಅಧಿಕಾರಿಗೆ ನೋಟಿಸನ್ನು ನೀಡಿರುತ್ತೇನೆ. ಸದರಿ ನೋಟಿಸನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-8 ಎಂದು, ಸಾಕ್ಷಿಯ ಸಹಿಯನ್ನು ನಿಪಿ-8(ಎ) ಎಂದು ಗುರುತಿಸಲಾಯಿತು. ನಂತರ ದಿಃ 18-08-2022 ರಂದು ಅಪಘಾತದ ವಾಹನವನ್ನು ಹಾಜರು ಪಡಿಸಿದ್ದು ಅದನ್ನು ಜಪ್ತಿ ಪಂಚನಾಮೆ ಮುಖಾಂತರ ಜಪ್ತಿ ಪಡಿಸಿಕೊಂಡಿರುತ್ತೇನೆ. ಸಾಕ್ಷಿಗೆ ಕಡತದಲ್ಲಿನ ಒಂದು ದಾಖಲೆಯನ್ನು ತೋರಿಸಲಾಗಿ ಸದರಿ ದಾಖಲೆಯಲ್ಲಿ ತಮ್ಮ ಸಹಿಯನ್ನು ಗುರುತಿಸಿರುತ್ತಾರೆ. ಸದರಿ ದಾಖಲೆಯು ಜಪ್ತಿ ಪಂಚನಾಮೆ ಆಗಿದ್ದು, ಅದನ್ನು ನಿಪಿ-09 ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-09(ಎ) ಎಂದು ಗುರುತಿಸಲಾಯಿತು. ನಂತರ ಸದರಿ ವಾಹನವನ್ನು ಪರಿಶೀಲಿಸುವಂತೆ RTO ಅಧಿಕಾರಿಗೆ ಮನವಿ ಸಲ್ಲಿಸಿರುತ್ತೇನೆ. ನಂತರ ಅವರಿಂದ ದಿನಾಂಕಃ 20-08-2022 ರಂದು ಐಎಂವಿ ವರದಿಯನ್ನು ಪಡೆದುಕೊಂಡಿರುತ್ತೇನೆ. ಸದರಿ ಐಎಂವಿ ವರದಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-10 ಎಂದು, ಸಾಕ್ಷಿಯ ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು. ಅದೇ ದಿವಸ ಆರೋಪಿಯ ವಿರುದ್ದ ದಸ್ತಗಿರಿ ಕ್ರಮ ಅನುಸರಿಸಿ ಸೂಕ್ತ ಜಾಮೀನಿನ ಮೇರೆಗೆ ಬಿಡುಗಡೆ ಮಾಡಿರುತ್ತೇನೆ. ನಂತರ ಚಾಸಾ-9 KSRTC ಇಲಾಖೆಯ ಇನ್‌ಡಿಮಿಟಿ ಬಾಂಡನ್ನು ಪಡೆದು ವಾಹನವನ್ನು ಬಿಡುಗಡೆ ಮಾಡಿರುತ್ತೇನೆ. ಸದರಿ ಇನ್‌ಡಿಮಿಟಿ ಬಾಂಡನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಪಿ-11 ಎಂದು, ಸಾಕ್ಷಿಯ ಸಹಿಯನ್ನು ನಿಪಿ-11(ಎ) ಎಂದು ಗುರುತಿಸಲಾಯಿತು. ನಂತರ ಚಾಸಾ-3 ರವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ದಿನಾಂಕಃ 25-08-2022 ರಂದು ಚಾಸಾ-1 ರವರ ಗಾಯದ ಪ್ರಮಾಣಪತ್ರವನ್ನು ಚಾಸಾ-10 ರವರಿಂದ ಪಡೆದುಕೊಂಡಿರುತ್ತೇನೆ. ಸದರಿ ಗಾಯದ ಪ್ರಮಾಣಪತ್ರವನ್ನು ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ಈಗಾಗಲೇ ನಿಪಿ-06 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-06(ಬಿ) ಎಂದು ಗುರುತಿಸಲಾಯಿತು. ನಂತರ ಆರೋಪಿಯ ವಿರುದ್ದ ದೋಷರೋಪಣ ಪಟ್ಟಿಯನ್ನು ಸಲ್ಲಿಸಿರುತ್ತೇನೆ. ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ. ( ಆರೋಪಿ ಪರ ವಕೀಲರು ಆರೋಪಿಯ ಗೈರು ಹಾಜರಾತಿಯನ್ನು ಮನ್ನಿಸಬೇಕೆಂದು ಅರ್ಜಿಯನ್ನು ಸಲ್ಲಿಸಿ ಅವರ ಗೈರು ಹಾಜರಾತಿಯಲ್ಲಿ ಸಾಕ್ಷಿಯನ್ನು ವಿಚಾರಣೆಗೆ ಒಳಪಡಿಸಿಕೊಳ್ಳಬೇಕೆಂದು ತಿಳಿಸಿರುತ್ತಾರೆ. ಆರೋಪಿಯ ಗುರುತುವಿಕೆಯ ಬಗ್ಗೆ ಆಕ್ಷೇಪಣೆ ಇಲ್ಲವೆಂದು ತಿಳಿಸಿರುತ್ತಾರೆ ). ಆದುದರಿಂದ ಆರೋಪಿಯ ಗುರುತಿಸುವಿಕೆಯನ್ನು ಕೈ ಬಿಡಲಾಯಿತು. ನಿಪಿ-3 ಮತ್ತು ನಿಪಿ-4 ರಲ್ಲಿರುವ ವಾಹನವನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲು** :- ಶ್ರೀ. NRS ವಕೀಲರ ಪರವಾಗಿ ಶ್ರೀ. **ಎಲ್.ಪಿ.ಎಸ್.** ವಕೀಲರಿಂದ

**ಆರೋಪಿ** ಪರವಾಗಿ :-

ಆರೋಪಿಯ ವಿರುದ್ದ ನಾನು ಸುಳ್ಳು ಪ್ರಥಮ ವರ್ತಮಾನ ವರದಿಯನ್ನು ದಾಖಲಿಸಿರುತ್ತೇನೆಂದರೆ ಸರಿಯಲ್ಲ. ನಾನು ಚಾಸಾ-3 ರವರ ಹೇಳಿಕೆಯನ್ನು ದಾಖಲಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ನಾನು ಸ್ಥಳಕ್ಕೆ ಭೇಟಿ ನೀಡಿಲ್ಲ ಹಾಗೂ ಯಾವುದೇ ಸಹಿಯನ್ನು ಪಡೆದುಕೊಂಡಿಲ್ಲ ಹಾಗೂ ಪಂಚಾನಾಮೆಯನ್ನು ಸ್ಥಳದಲ್ಲಿ ಮಾಡಿಲ್ಲ ಎಂದರೆ ಸರಿಯಲ್ಲ. ಠಾಣೆಯಲ್ಲಿ ಮಾಡಿರುವ ಮಹಜರಿಗೆ ನಾನು ಸಹಿ ಮಾಡಿಸಿಕೊಂಡಿರುತ್ತೇನೆಂದರೆ ಸರಿಯಲ್ಲ. ಆರೋಪಿಯ ವಿರುದ್ದ ಯಾವುದೇ ಸಾಕ್ಷ್ಯದಾರಗಳು ಇಲ್ಲದೇ ಇದ್ದರೂ ಕೂಡ ನಾನು ಪಿರ್ಯಾದಿಗೆ ಅನುಕೂಲವಾಗಲೀ ಎಂದು ಸುಳ್ಳು ದೋಷರೋಪಣ ಪಟ್ಟಿ ಸಲ್ಲಿಸಿರುತ್ತೇನೆಂದರೆ ಸರಿಯಲ್ಲ.

**ಮರು ವಿಚಾರಣೆ :- ಇರುವುದಿಲ್ಲ.**

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು )

ಓ. ಹೇ. ಕೇ. ಸ. ಎಂ. ಒ. ನನ್ನ ಸಮಕ್ಷಮ

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ.
ನ್ಯಾಯಾಲಯ, ಮಾಗಡಿ.